**<u>ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಿರುಗುಪ್ಪ</u>**

**<u>ಸಿ.ಸಿ. ನಂ. 1072/2018</u>**

**<u>ಸಿ.ಡಬ್ಲ್ಯೂ: 9 ಪಿ.ಡಬ್ಲ್ಯೂ: 2</u>**

ಸಾಕ್ಷಿದಾರನ ಹೆಸರು : ಕೃಷ್ಣ ಮೂರ್ತಿ

ತಂದೆಯ ಹೆಸರು : ತಿಮ್ಮಯ್ಯ

ವಯಸ್ಸು : 39 ವರ್ಷ

ಕೆಲಸ : ಮುಖ್ಯ ಪೊಲೀಸ್ ಪೇದೆ

ವಾಸ : ಬಳ್ಳಾರಿ

**<u>ಸಾಕ್ಷಿಗೆ ದಿನಾಂಕ:08.04.2024 ರಂದು ಪ್ರಮಾಣ ವಚನ ಬೋಧಿಸಲಾಯಿತು</u>**

**<u>ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ</u>**

1. ನಾನು 2017 ರಿಂದ 2021 ರವರೆಗೂ ಸಿರುಗುಪ್ಪ ಪೋಲೀಸ್ ಠಾಣೆಯಲ್ಲಿ ಪಿಸಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿ: 23.07.2018 ರಂದು ನಾನು ಎಸ್ ಹೆಚ್ ಒ ಕರ್ತವ್ಯದಲ್ಲಿದ್ದಾಗ ಚಾಸಾ.1 ರವರು ದಾಳಿ ನಡೆಸಿ ಮಟಕಾ ಜೂಜಟದಲ್ಲಿ ತೊಡಗಿದ 3 ಆರೊಪಿತರನ್ನು , ಮಟಕಾ ಚೀಟಿ , ಬಾಲ್ ಪೆನ್ನು ಮತ್ತು 960/- ನಗದು ಹಣ ತಂದು ಹಾಜರುಪಡಿಸಿದ್ದು ಪ್ರಕರಣ ಎನ್ ಸಿ ಸ್ವರೂಪದ್ದು ಇರುವುದರಿಂದ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲು ನ್ಯಾಯಲಾಯದ ಅನುಮತಿ ಸಲುವಾಗಿ ನ್ಯಾಯಾಲಯಕ್ಕೆ ವಿನಂತಿ ಪತ್ರ ಬರೆದಿರುತ್ತೇನೆ. ಸದರಿ ಪತ್ರವನ್ನು ನಿಪಿ.2 ಎಂದು , ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು.

3. ದಿ:28.07.2018 ರಂದು ಕೃತ್ಯ ಸ್ಥಳಕ್ಕೆ ಬೇಟಿ ನೀಡಿ ಚಾಸ-.4 ಮತ್ತು 5 ರವರ ಸಮಕ್ಷಮ ಪಂಚನಾಮೆಯನ್ನು ಬೆಳಿಗ್ಗೆ 10.30 ರಿಂದ 211.30 ಗಂಟೆ ವರೆಗೆ ಜರುಗಿಸಿರುತ್ತೇನೆ. ಸದರಿ ಪಂಚನಾಮೆಯಜನ್ನು ನಿಪಿ.3 ಎಂದು , ಸಾಕ್ಷಿಯ ಸಹಿಯನ್ನು ನಿಪಿ.3(ಎ) ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ.6 , 7 ಮತ್ತು 8 ರವರ ಹೇಳಿಕೆಗಳನ್ನುಪಡೆದಿರುತ್ತೇನೆ. ಸದರಿಯವರ ಹೇಳಿಕೆಗಳನ್ನು ಕ್ರಮವಾಗಿ ನಿಪಿ.4 ರಿಂದ 6 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಗಳನ್ನು ನಿಪಿ.4(ಎ)ರಿಂದ 6(ಎ) ಎಂದು ಗುರುತಿಸಲಾಯಿತು. ಅದೇ ದಿನ 1 ಮತ್ತು 2 ನೇ ಆರೋಪಿತರ ಸ್ವಖುಷಿ ಹೇಳಿಕೆಗಳನ್ನು

ಪಡೆದಿರುತ್ತೇನೆ. ಆರೋಪಿತರನ್ನು ಸೂಕ್ತ ಜಾಮೀನು ಪಡೆದು ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ತನಿಖೆ ಮುಗಿದಿದ್ದರಿಂದ ಆರೋಪಿತರ ವಿರುದ್ದ ದೋಷಾರೋಪಣ ಪಟ್ಟಿಯನ್ನು ದಾಖಲಿಸಿರುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ 1 ನೇ ಆರೋಪಿಯನ್ನ ನೋಡಿ ಗುರುತಿಸಿರುತ್ತಾರೆ. 2 ನೇ ಆರೋಪಿಯು ಗೈರು ಹಾಜರು ಇದ್ದು ಆತನ ಗುರುತಿಸುವಿಕೆಯ ಬಗ್ಗೆ ಯಾವುದೇ ತಕರಾರು ಇರುವುದಿಲ್ಲ ಎಂದು ಆತನ ಪರ ವಕೀಲರು ಮಂಡಿಸಿರುತ್ತಾರೆ. ಸಾಕ್ಷಿಯು ನ್ಯಾಯಾಒಲಯದ ಮುಂದಿರುವ ಮಟಕಾ ಚೀಟಿ , ಬಾಲ್ ಪೆನ್ನು ಮತ್ತು ನಗದು ಹಣ ರೂ.960/- ಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಮುದ್ದೆಮಾಲು 1 ರಿಂದ 3 ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಆರೋಪಿತರ ಪರವಾಗಿ : ಶ್ರೀ ಎ ಎಸ್ ಜಿಃ**

4. ನಾನು ಮಮುಖ್ಯ ವಿಚಾರಣೆಯಲ್ಲಿ ಹೇಳಿದಂತೆ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಮತ್ತು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದಿಲ್ಲ ಎಂದರೆಸರಿಯಲ್ಲ. ನ್ಯಾಯಾಲಯದ ಮುಂದಿರುವ ಮುದ್ದೆಮಾಲಿಗೂ ಮತ್ತು ಆರೋಪಿತರಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ತಪ್ಪು ಮಾಡದಿದ್ದರು ಕೂಡ ಅವರ ವಿರುದ್ದ ಸುಳ್ಳು ದೋಷಾರೋಪಣ ಪಟ್ಟಿ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸ-.1 ರವರು ನನ್ನ ಮೇಲಾಧಿಕಾರಿಯಾದ್ದರಿಂದ ಅವರಿಗೆ ಅನುಕೂಲ ಆಗಲೆಂದುಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು-ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೆ. ಸರಿ ಇದೆ.

**ಸಿವಿಲ್ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಧೀಶರು, ಸಿರುಗುಪ್ಪ .**

**<u>ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಲಯ, ಸಿರುಗುಪ್ಪ</u>**

**<u>ಸಿ.ಸಿ. ನಂ.1072 /2018</u>**

**<u>ಸಿ.ಡಬ್ಲ್ಯೂಃ 2 ಪಿ.ಡಬ್ಲ್ಯೂಃ 3</u>**

ಸಾಕ್ಷಿದಾರನ ಹೆಸರು : ಹುಸೇನ್ ಸಾಬ್
ತಂದೆಯ ಹೆಸರು : ಸಾಯಿಬಣ್ಣ
ವಯಸ್ಸು : 55 ವರ್ಷ
ಕೆಲಸ : ವ್ಯವಸಾಯ
ವಾಸ : ನಾಡಂಗ

**<u>ಸಾಕ್ಷಿಗೆ ದಿನಾಂಕಃ08.04.2024 ರಂದು ಪ್ರಮಾಣ ವಚನ ಬೋಧಿಸಲಾಯಿತು</u>**

**<u>ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ</u>**

1. ಸಾಕ್ಷಿಗೆ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ಸಹಿಯನ್ನು ಸಾಕ್ಷಿಯು ಗುರುತಿಸಿದ್ದರಿಂದ ಸದರಿ ಪಂಚನಾಮೆಯನ್ನು ಈಗಾಗಲೇ ನಿ.ಪಿ.1 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿ.ಪಿ.1(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 4-5 ವರ್ಷಗಳ ಹಿಂದೆ ಸಿರುಗುಪ್ಪ ಪೊಲೀಸ್ ಠಾಣೆಯಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ . ನಿ.ಪಿ.1 ರಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿದಾರರು ಅಭಿಯೋಜಕರಿಗೆ ಸಹಾಯವಾಗಿ ಸಾಕ್ಷ್ಯ ನುಡಿಯುತ್ತಿಲ್ಲ ಆದ ಕಾರಣ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲು ಮತ್ತು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಗಿದೆ)**

**<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>**

2. ದಿಃ23.07.2018 ರಂದು ಬಂಡ್ರಾಳು ಗ್ರಾಮದ ಬಸವಣ್ಣ ತಾತನ ಗುಡಿ ಹತ್ತಿರ ಸಾರ್ವಜನಿಕ ರಸ್ತೆಯಲ್ಲಿ ದಾಳಿ ನಡೆಸಿ ಆರೋಪಿತರ ವಶದಿಂದ 1 ಮಟಕಾ ಪಟ್ಟಿ ಮತ್ತು 1 ಬಾಲ್

ಪೆನ್ನನ್ನು ಪೊಲೀಸರು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಸಮಯದಲ್ಲಿ ನಾನು ಸ್ಥಳದಲ್ಲಿ ಹಾಜರು ಇದ್ದು ಸಹಿ ಮಾಡಿ ಪಂಚನಾಮೆಯಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರವಾಗಿ : ಏನೂ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೆ. ಸರಿ ಇದೆ.

**ಸಿವಿಲ್ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಧೀಶರು, ಸಿರುಗುಪ್ಪ .**